ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1702
ಸದಸ್ಯರ ಹೆಸರು : ಶ್ರೀಮತಿ ಭಾರತಿ ಶೆಟ್ಟಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ : 18.03.2026
ಉತ್ತರಿಸುವ ಸಚಿವರು : ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ರಾಜ್ಯದ ಮದರಸಾಗಳಲ್ಲಿ ಯಾವ ರೀತಿಯ ಶಿಕ್ಷಣವನ್ನು ನೀಡಲಾಗುತ್ತಿದೆ ಸದರಿ ಪಠ್ಯಪುಸ್ತಕಗಳನ್ನು ಯಾರು ಮತ್ತು ಯಾವ ಆಧಾರಗಳ ಮೇಲೆ ಅಂತಿಮಗೊಳಿಸಲಾಗುತ್ತಿದೆ; (ವಿವರ ಒದಗಿಸುವುದು)	ರಾಜ್ಯದ ಮದರಸಾಗಳಲ್ಲಿ ಧಾರ್ಮಿಕ ಶಿಕ್ಷಣ ನೀಡುತ್ತಿದ್ದು, ಇದರ ಜೊತೆ ಮೌಲ್ಯಾಧಾರಿತ ಮತ್ತು ಔಪಚಾರಿಕ ಶಿಕ್ಷಣವನ್ನು ಸಹ ನೀಡಲಾಗುತ್ತಿದೆ. ಮುಂದುವರೆದು ಸರ್ಕಾರದಿಂದ ಮದರಸಾಗಳಲ್ಲಿ ಯಾವುದೇ ಪಠ್ಯಪುಸ್ತಕಗಳನ್ನು ಅಂತಿಮಗೊಳಿಸಲಾಗುವುದಿಲ್ಲ.
ಆ)	ಬಾಲಕರಿಗೆ ಮತ್ತು ಬಾಲಕಿಯರಿಗೆ ನೀಡುತ್ತಿರುವ ಶಿಕ್ಷಣದಲ್ಲಿ ವ್ಯತ್ಯಾಸಗಳಿವೆಯೇ; (ಇದ್ದಲ್ಲಿ ಕಾರಣಗಳ ಸಹಿತ ವಿವರಿಸುವುದು);	ಬಾಲಕರಿಗೆ ಮತ್ತು ಬಾಲಕಿಯರಿಗೆ ನೀಡುತ್ತಿರುವ ಶಿಕ್ಷಣದಲ್ಲಿ ಯಾವುದೇ ವ್ಯತ್ಯಾಸ ಇರುವುದಿಲ್ಲ.
ಇ)	ಕರ್ನಾಟಕ ಹೊರತುಪಡಿಸಿ ಹೊಂದಿಕೊಂಡಿರುವ ರಾಜ್ಯಗಳಲ್ಲಿ ನೀಡುತ್ತಿರುವ ಶಿಕ್ಷಣಕ್ಕೂ ಮತ್ತು ರಾಜ್ಯದಲ್ಲಿ ನೀಡುತ್ತಿರುವ ಶಿಕ್ಷಣಕ್ಕೂ ಇರುವ ವ್ಯತ್ಯಾಸಗಳೇನು; (ರಾಜ್ಯವಾರು ಮಾಹಿತಿ ಒದಗಿಸುವುದು);	ಅನ್ವಯಿಸುವುದಿಲ್ಲ.
ಈ)	ಕೇರಳದಲ್ಲಿ ಮುಸ್ಲಿಂ ಮುಖಂಡರು ಮಹಿಳೆಯರಿಗೆ ಸರ್ಕಾರಿ ಮತ್ತು ಸರ್ಕಾರೇತರ ಕೆಲಸಗಳಲ್ಲಿ ತೊಡಗಿಸುವುದನ್ನು ಪ್ರತಿಬಂದಿಸಬೇಕೆಂದು ನೀಡಿರುವ ಕರೆಯ ಬಗ್ಗೆ ರಾಜ್ಯ ಸರ್ಕಾರದ ಅಭಿಪ್ರಾಯಗಳೇನು ?	ಅನ್ವಯಿಸುವುದಿಲ್ಲ.

ಸಂಖ್ಯೆ: MWD-LMQ/45/2026

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು